# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಎಂ.ವೈ.ಎಸ್-304/2016

ಬಹುಮಹಡಿಗಳ ಕಟ್ಟಡ,
ಡಾ: ಅಂಬೇಡ್ಕರ್ ವೀಧಿ,
ಬೆಂಗಳೂರು-560 001,
ದಿನಾಂಕ: 17/03/2017.

## ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(1)ರ ಅನ್ವಯ ಶಿಫಾರಸ್ಸು ವರದಿ

ವಿಷಯ: ಶ್ರೀ ಸ್ವಾಮಿ, ಬಿಲ್ ಕಲೆಕ್ಟರ್, ನಗರಸಭೆ, ಮಡಿಕೇರಿ, ಕೊಡಗು ಜಿಲ್ಲೆ ರವರು ಸರ್ಕಾರಿ ನೌಕರರಾಗಿರುವುದಿಲ್ಲ, ಈ ಸಂಬಂಧ ಸದರಿಯವರ ವಿರುದ್ಧ ಕೆ.ಸಿ.ಎಸ್.ಆರ್. ನಿಯಮಾವಳಿಗಳಡಿಯಲ್ಲಿ ಕ್ರಮ ಜರುಗಿಸಲು ಸಾಧ್ಯವಿಲ್ಲದೇ ಇರುವ ಕಾರಣ, ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದಡಿ ಕ್ರಮ ಕೈಗೊಳ್ಳಲು ನಿರ್ದೇಶಿಸಿ ಶಿಸ್ತು ಪ್ರಾಧಿಕಾರಕ್ಕೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ ಶಿಫಾರಸ್ಸು ವರದಿಯ ನಡವಳಿಕೆ-ಕುರಿತು.,

*****

ಶ್ರೀ ಎಂ.ಎ.ಮನ್ಸೂರ್ ಬಿನ್ ಲೇಟ್ ಎಂ.ಎಂ.ಅಬ್ದುಲ್ ಖಾದರ್, ಕೊಡಗು ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ರವರು ಈ ದೂರನ್ನು, (1) ಶ್ರೀ ಸಜೀತ್ ಕುಮಾರ್, ಬಿಲ್ ಕಲೆಕ್ಟರ್, ನಗರಸಭೆ, ಮಡಿಕೇರಿ, ಕೊಡಗು ಜಿಲ್ಲೆ (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ದಾಖಲಿಸಿ ಎದುರುದಾರರಿಂದ 11 ರಶೀದಿಗಳ ಒಟ್ಟು ಮೊತ್ತ ರೂ.2,26,705/- ಗಳನ್ನು ನಗರಸಭೆಯಲ್ಲಿ ಜಮೆ ಆಗದೇ ದುರುಪಯೋಗ ಪಡಿಸಿಕೊಂಡಿರುತ್ತಾರೆಂದು ಆರೋಪಿಸಿದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 9 ರಡಿಯಲ್ಲಿ ಪ್ರದತ್ತವಿರುವ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

2. ದೂರುದಾರರ ದೂರಿಗೆ ಸಂಬಂಧಿಸಿದಂತೆ, ಪೋಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಮೈಸೂರು ರವರು ಪೋಲೀಸ್ ಉಪಾಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಮಡಿಕೇರಿ ರವರ ಮುಖಾಂತರ ಕೂಲಂಕಷವಾಗಿ ತನಿಖೆ ನಡೆಸಿ ವಿವರವಾದ ವರದಿಯನ್ನು ಪಡೆದು, ನಂತರ

ಸದರಿ ವರದಿಯನ್ನು ಪರಿಶೀಲಿಸಿ ದಿನಾಂಕ: 03/08/2016 ರಂದು ತಮ್ಮ ಅಭಿಪ್ರಾಯದ ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ವರದಿಯಲ್ಲಿ,

(1) 1ನೇ ಎದುರುದಾರರಾದ ಶ್ರೀ ಸಜಿತ್‌ಕುಮಾರ್, ಬಿಲ್ ಕಲೆಕ್ಟರ್, ನಗರಸಭೆ, ಮಡಿಕೇರಿ ಹಾಗೂ (2) ಶ್ರೀ ಸ್ವಾಮಿ, ಬಿಲ್ ಕಲೆಕ್ಟರ್ ರವರುಗಳು ದೂರುದಾರಿಂದ ಮಳಿಗೆ ಬಾಡಿಗೆ ಸಂಬಂಧ 11 ರಶೀದಿಗಳಲ್ಲಿ ವಸೂಲು ಮಾಡಿದ ರೂ.2,26,705/- ಗಳನ್ನು ನಗರಸಭೆ ಲೆಕ್ಕಕ್ಕೆ ಜಮೆ ಮಾಡದೇ ಕಛೇರಿ ಪ್ರತಿಗಳಲ್ಲಿ ಬೇರೆ ಬೇರೆ ಹೆಸರುಗಳನ್ನು ನಮೂದಿಸಿ ರೂ.7,920/- ಗಳನ್ನು ಮಾತ್ರ ನಗರಸಭೆಗೆ ಜಮಾ ಮಾಡಿ ಹಣ ದುರುಪಯೋಗ ಪಡಿಸಿಕೊಂಡಿರುವುದು ಕಂಡುಬಂದಿರುತ್ತದೆ.

3. ಪೊಲೀಸ್ ಅಧೀಕ್ಷಕರು, ವರದಿಯಲ್ಲಿ ನಮೂದಿಸಿರುವ 1ನೇ ಎದುರುದಾರರ ವಿರುದ್ಧ ಈಗಾಗಲೇ ದಿನಾಂಕ: 20/12/2016 ರಂದು ಕರ್ನಾಟಕ ಲೋಕಾಯುಕ್ತ ಕಾಯ್ದೆ ರಡಿಯಲ್ಲಿ ಶಿಸ್ತು ಪ್ರಾಧಿಕಾರಕ್ಕೆ ವರದಿಯನ್ನು ಕಳುಹಿಸಲಾಗಿರುತ್ತದೆ.

4. ಆದರೆ, ಪೊಲೀಸ್ ಅಧೀಕ್ಷಕರು ವರದಿಯಲ್ಲಿ ನಮೂದಿಸಿರುವ ಶ್ರೀ ಸ್ವಾಮಿ, ಬಿಲ್ ಕಲೆಕ್ಟರ್, ನಗರಸಭೆ, ಮಡಿಕೇರಿ, ಕೊಡಗು ಜಿಲ್ಲೆ ರವರು ಸದರಿ ದೂರಿನಲ್ಲಿ ಎದುರುದಾರರಾಗಿರುವುದಿಲ್ಲ. ಆದ್ದರಿಂದ, ಸದರಿಯವರನ್ನು ಮುಖಪುಟದಲ್ಲಿ 2ನೇ ಎದುರುದಾರರನ್ನಾಗಿ implead ಮಾಡಿ, ನಂತರ 2ನೇ ಎದುರುದಾರರಿಗೆ ಆಕ್ಷೇಪಣೆಯನ್ನು ಸಲ್ಲಿಸುವಂತೆ ತಿಳಿಸಲಾಗಿದ್ದರೂ ಸಹಾ, ಇದುವರೆವಿಗೂ ಯಾವುದೇ ಪೂರಕ ದಾಖಲಾತಿಗಳನ್ನು ನಿಗಧಿತ ದಿನಾಂಕದೊಳಗಾಗಿ ಆಕ್ಷೇಪಣೆಯನ್ನು ಸಲ್ಲಿಸಿರುವುದಿಲ್ಲ. ಆದ್ದರಿಂದ, ಸದರಿ ಪ್ರಕರಣದಲ್ಲಿ 2ನೇ ಎದುರುದಾರರ ಆಕ್ಷೇಪಣೆ ಇಲ್ಲವೆಂದು ಪರಿಗಣಿಸಲಾಗಿದೆ.

32. ದೂರಿನಲ್ಲಿ ಇರುವ ಆಪಾದನೆ ಹಾಗೂ ದಾಖಲಾತಿಗಳನ್ನು ಪರಿಶೀಲಿಸಲಾಗಿ 2ನೇ ಎದುರುದಾರರುಗಳು ಈ ಕೆಳಕಂಡಂತೆ ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುತ್ತದೆ.

(1) 2ನೇ ಎದುರುದಾರರಾದ ಶ್ರೀ ಸ್ವಾಮಿ, ಬಿಲ್ ಕಲೆಕ್ಟರ್, ನಗರಸಭೆ, ಮಡಿಕೇರಿ ರವರು ದೂರುದಾರಿಂದ ಮಳಿಗೆ ಬಾಡಿಗೆ ಸಂಬಂಧ 11 ರಶೀದಿಗಳಲ್ಲಿ ವಸೂಲು ಮಾಡಿದ ರೂ.2,26,705/- ಗಳನ್ನು ನಗರಸಭೆ ಲೆಕ್ಕಕ್ಕೆ ಜಮೆ ಮಾಡದೇ ಕಛೇರಿ ಪ್ರತಿಗಳಲ್ಲಿ

ಬೇರೆ ಬೇರೆ ಹೆಸರುಗಳನ್ನು ನಮೂದಿಸಿ ರೂ.7,920/- ಗಳನ್ನು ಮಾತ್ರ ನಗರಸಭೆಗೆ ಜಮಾ ಮಾಡಿ ಹಣ ದುರುಪಯೋಗ ಪಡಿಸಿಕೊಂಡು ಕರ್ತವ್ಯ ಲೋಪವೆಸಗಿರುತ್ತಾರೆ.

5. ದೂರುದಾರರು ದೂರು ಹಾಗೂ ಲಗತ್ತಿಸಿರುವ ದಾಖಲಾತಿಗಳನ್ನು ಪರಿಶೀಲಿಸಿದಾಗ, ಮೇಲ್ನೋಟಕ್ಕೆ '2ನೇ ಎದುರುದಾರ' ವಿರುದ್ಧ ಇಲಾಖಾ ವಿಚಾರಣೆ ನಡೆಸುವ ಸಂಬಂಧ ಮುಂದುವರಿಯುವುದು ಅಗತ್ಯ ಎಂದು ಕಂಡುಬಂದಿದ್ದು, '2ನೇ ಎದುರುದಾರರು' ಸರ್ಕಾರಿ/ಸಾರ್ವಜನಿಕ ಸೇವಕರಾಗಿದ್ದು ತಮ್ಮ ಕರ್ತವ್ಯ ಪಾಲನೆಯಲ್ಲಿ ಪರಿಪೂರ್ಣ ಕರ್ತವ್ಯ ನಿಷ್ಠೆಯನ್ನು ತೋರಿಸದೆ ಮತ್ತು ಸಾರ್ವಜನಿಕ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ವೇದ್ಯವಾಗುತ್ತದೆ.

6. 2ನೇ ಎದುರುದಾರರಾದ ಶ್ರೀ ಸ್ವಾಮಿ, ಬಿಲ್ ಕಲೆಕ್ಟರ್, ನಗರಸಭೆ, ಮಡಿಕೇರಿ, ಕೊಡಗು ಜಿಲ್ಲೆ ರವರು ಸರ್ಕಾರಿ ನೌಕರರಾಗಿರುವುದಿಲ್ಲ, ಈ ಸಂಬಂಧ ಸದರಿಯವರ ವಿರುದ್ಧ ಕೆ.ಸಿ.ಎಸ್.ಆರ್. ನಿಯಮಾವಳಿಗಳಡಿಯಲ್ಲಿ ಕ್ರಮ ಜರುಗಿಸಲು ಸಾಧ್ಯವಿಲ್ಲದೇ ಇರುವ ಕಾರಣ, ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದಡಿ ಕ್ರಮ ಕೈಗೊಳ್ಳಲು ನಿರ್ದೇಶಿಸಿ ಸಕ್ಷಮ ಪ್ರಾಧಿಕಾರಕ್ಕೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ ಶಿಫಾರಸ್ಸು ಮಾಡಿದೆ.

7. ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984, ಕಲಂ 12(2)ರ ಪ್ರಕಾರ, ಶಿಸ್ತು ಪ್ರಾಧಿಕಾರವು ವರದಿಯಂತೆ ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಿರುವ ಕ್ರಮವನ್ನು ಈ ವರದಿ ಮುಟ್ಟಿದ ದಿನಾಂಕದಿಂದ <u>ಒಂದು ತಿಂಗಳ ಅವಧಿಯೊಳಗೆ</u> ಈ ಪ್ರಾಧಿಕಾರಕ್ಕೆ ತಿಳಿಸಲೂ ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

(signature) 17/3/17.

**(ನ್ಯಾಯಮೂರ್ತಿ ಸುಭಾಷ್ ಬಿ. ಅಡಿ)**
**ಉಪಲೋಕಾಯುಕ್ತರು-2,**
**ಕರ್ನಾಟಕ ರಾಜ್ಯ, ಬೆಂಗಳೂರು.**